# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 391 |
| ವಿಧಾನ ಸಭೆಯ ಸದಸ್ಯರ ಹೆಸರು | : | ಶ್ರೀ ಶಿವಕುಮಾರ್ ಕೆ, (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 29.01.2026 |
| ಉತ್ತರಿಸಬೇಕಾದ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ವರ್ಗಗಳ ಪಟ್ಟಿಯಲ್ಲಿರುವ ಸಮುದಾಯಗಳ ಪೈಕಿ ಅತೀ ಹಿಂದುಳಿದ ಸಮುದಾಯಗಳನ್ನು ಗುರುತಿಸಿ ಅವರಿಗೆ ವಿಶೇಷ ನೇರ ನೇಮಕಾತಿ (Special Direct Recruitment) ಕಲ್ಪಿಸಲು ಹೊಸ ಕಾನೂನು ರೂಪಿಸುವ ಅಥವಾ ವಿಶೇಷ ನಿಯಮಾವಳಿಗಳನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ನೇಮಕಾತಿ ಪ್ರಕ್ರಿಯೆಯನ್ನು ಯಾವ ಇಲಾಖೆಗಳ ಅಡಿಯಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ; | 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-199ರಲ್ಲಿ "ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ 13 ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಇರುಳಿಗ, ಕೊರಗ, ಸೋಲಿಗ, ಯರವ, ಪಣಿಯನ್, ಹಲಸರು, ಗೌಡಲು, ಸಿದ್ದಿ, ಬೆಟ್ಟಕುರುಬ, ಕಾಡುಕುರುಬ, ಕುಡಿಯ ಮತ್ತು ಮಲೆಕುಡಿಯ ಈ ಜನಾಂಗಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ನೀಡುವ ಸಲುವಾಗಿ ವಿಶೇಷ ನೇರ ನೇಮಕಾತಿಯನ್ನು ಕೈಗೊಳ್ಳಲಾಗುವುದು" ಎಂದು ಘೋಷಿಸಲಾಗಿರುತ್ತದೆ.<br><br>ಸದರಿ ಘೋಷಣೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗಿರುತ್ತದೆ:-<br><br>• ವಿಶೇಷ ನೇರ ನೇಮಕಾತಿ ಕೈಗೊಳ್ಳುವ ಕುರಿತಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಕಾನೂನು ಇಲಾಖೆಯ ಅಭಿಪ್ರಾಯ ಪಡೆಯಲಾಗಿರುತ್ತದೆ.<br><br>• 13 ಬುಡಕಟ್ಟು ಸಮುದಾಯಗಳ ಜನರು ಹೆಚ್ಚು ವಾಸಿಸುವ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಮೈಸೂರು, ಚಾಮರಾಜನಗರ, ಕೊಡಗು, ರಾಮನಗರ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಖಾಲಿ ಇರುವ ಗ್ರೂಪ್-ಸಿ ಮತ್ತು ಡಿ ವೃಂದದ ಹುದ್ದೆಗಳ ವಿವರಗಳನ್ನು ಒದಗಿಸುವಂತೆ ವಿವಿಧ ಇಲಾಖೆಗಳನ್ನು ಕೋರಲಾಗಿದೆ.<br><br>• ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಖಾಲಿ ಇರುವ ಹುದ್ದೆಗಳ ಮಾಹಿತಿ ಸ್ವೀಕೃತವಾಗಿದ್ದು, ಇನ್ನುಳಿದಂತೆ ಕಂದಾಯ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಶೇಷ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆಗಳಿಂದ ಮಾಹಿತಿಯನ್ನು ನಿರೀಕ್ಷಿಸಲಾಗುತ್ತಿದೆ.<br><br>ಸದರಿ ಇಲಾಖೆಗಳಿಂದ ಮಾಹಿತಿ ಸ್ವೀಕೃತವಾದ ನಂತರ ವಿಶೇಷ ನೇರ ನೇಮಕಾತಿ ನಿಯಮಗಳನ್ನು ರಚಿಸುವ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಮತ್ತು ಸಂಸದೀಯ ವ್ಯವಹಾರಗಳ ಮತ್ತು ಶಾಸನಾ ರಚನಾ ಇಲಾಖೆಯ ಅಭಿಪ್ರಾಯವನ್ನು ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| ಆ) | ಪರಿಶಿಷ್ಟ ಪಂಗಡದ ಆದಿವಾಸಿ ಸಮುದಾಯದ(ಯರವ, ಸೋಲಿಗ, ಜೇನುಕುರುಬ, ಕೊರಗ) ಇವರುಗಳನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ನೇರ ನೇಮಕಾತಿ ಮಾಡುವ ಪ್ರಸ್ತಾವನೆ ಸರ್ಕಾರದಲ್ಲಿದೆಯೇ? | |

**ಸಂಖ್ಯೆ: STW/SECA/SAD/12/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು